# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 861 |
| ಸದಸ್ಯರ ಹೆಸರು | : | ಡಾ: ವೈ.ಎ. ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14-07-2023 |
| ಉತ್ತರಿಸುವ ಸಚಿವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಈ ಅಂಗನವಾಡಿ ಕೇಂದ್ರಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ 67570 ಅಂಗನವಾಡಿ ಕೇಂದ್ರಗಳು ಹಾಗೂ 2329 ಮಿನಿ ಅಂಗನವಾಡಿ ಕೇಂದ್ರಗಳು ಸೇರಿ ಒಟ್ಟು 69899 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಅಂಗನವಾಡಿ ಕೇಂದ್ರಗಳಲ್ಲಿ 6 ತಿಂಗಳಿಂದ 3 ವರ್ಷದ 2212653 ಮತ್ತು 3 ರಿಂದ 6 ವರ್ಷದ 1737526 ಮಕ್ಕಳು ಸೇರಿ ಒಟ್ಟು 3950179 ಮಕ್ಕಳು ದಾಖಲಾಗಿ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ.<br><br>ಜಿಲ್ಲಾವಾರು ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ) | ಈ ಅಂಗನವಾಡಿ ಕೇಂದ್ರಗಳಲ್ಲಿರುವ ಮಕ್ಕಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಕರ್ಯಗಳೇನು; (ವಿವರ ನೀಡುವುದು) | ಅಂಗನವಾಡಿ ಕೇಂದ್ರಗಳಲ್ಲಿರುವ ಮಕ್ಕಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಕರ್ಯಗಳ ವಿವರ ಈ ಕೆಳಗಿನಂತಿದೆ.<br><br>**ಪೂರಕ ಪೌಷ್ಠಿಕ ಆಹಾರ :**<br><br>ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br><br>• ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.8.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.<br>• ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲೀ. ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.<br>• 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್. ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>• 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ. |

- ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.
- ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತಿದೆ.

**ಚುಚ್ಚುಮದ್ದು ಕಾರ್ಯಕ್ರಮ :**

6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.

**ಆರೋಗ್ಯ ತಪಾಸಣೆ:**

ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ 3 ತಿಂಗಳಿಗೊಮ್ಮೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.

**ಮಾಹಿತಿ ಸೇವೆ :**

ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಠಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ.

**ಮಾತೃಪೂರ್ಣ ಯೋಜನೆ:**

- ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.
- ಈ ಪೂರ್ಣ ಊಟದಲ್ಲಿ ಅನ್ನ, ಸಾಂಬಾರ್, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ, 200 ಮಿ.ಲೀ. ಹಾಲು ಮತ್ತು ಚಿಕ್ಕಿಯನ್ನು ತಿಂಗಳಿಗೆ 25 ದಿನಗಳು ನೀಡಲಾಗುತ್ತಿದೆ.

**ಪ್ರಧಾನಮಂತ್ರಿ ಮಾತೃವಂದನಾ ಯೋಜನೆ (ಪಿ.ಎಂ.ಎಂ.ವಿ.ವೈ)**

"ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ" ಯಡಿ ಪರಿಷ್ಕೃತ ಮಾರ್ಗಸೂಚಿಯಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ನೋಂದಣಿ ಮಾಡಿಸಿದ ಗರ್ಭಿಣಿ / ಬಾಣಂತಿ ಮಹಿಳೆಯರಿಗೆ ರೂ.5,000/- ಗಳ ಹೆರಿಗೆ ಭತ್ಯೆಯನ್ನು ಎರಡು ಕಂತುಗಳಲ್ಲಿ ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ವರ್ಗಾಯಿಸಲಾಗುವುದು. 2ನೇ ಮಗು ಹೆಣ್ಣು ಮಗುವಾಗಿದ್ದಲ್ಲಿ ಒಂದೇ ಕಂತಿನಲ್ಲಿ ರೂ.6,000/- ಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ.

| | | |
|---|---|---|
| ಇ. | ಅಂಗನವಾಡಿ ಕೇಂದ್ರಗಳಿಗೆ ಸರಬರಾಜಾಗುತ್ತಿರುವ ಆಹಾರ ಪದಾರ್ಥಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಂತಹ ಪ್ರಕರಣಗಳ ವಿವರಗಳನ್ನು ನೀಡುವುದು; | ಅಂಗನವಾಡಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗುತ್ತಿದೆ. ಅಂಗನವಾಡಿ ಕೇಂದ್ರಗಳಿಗೆ ಒದಗಿಸುತ್ತಿರುವ ಆಹಾರ ಪದಾರ್ಥಗಳು ಉತ್ತಮ ಗುಣಮಟ್ಟದಿಂದ ಕೂಡಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಒಳಪಡಿಸಿ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ.<br><br>ಕಲಬುರಗಿ ಜಿಲ್ಲೆಯ ಆಳಂದ ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ದಿ:01-04-2023 ರಂದು, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಂಕಿತ ಅಧಿಕಾರಿಗಳು ಸರಸಂಬಾ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿರುತ್ತಾರೆ. ಈ ಸಂದರ್ಭದಲ್ಲಿ ಸದರಿ ಅಂಗನವಾಡಿಯಲ್ಲಿ ದಾಸ್ತಾನಿರುವ ತೊಗರಿಬೇಳೆ, ಸಾಂಬಾರ ಮಸಾಲಾ ಹಾಗೂ ಹೆಸರು ಕಾಳುಗಳನ್ನು ಆಹಾರ ವಿಶ್ಲೇಷಣೆಗೆ ಒಳಪಡಿಸಿದಾಗ, ತೊಗರಿ ಬೇಳೆ, ಸಾಂಬಾರ ಮಸಾಲಾ ಗುಣಮಟ್ಟವಲ್ಲದ (Substandard) ಹಾಗೂ ಹೆಸರು ಕಾಳು ಅಸುರಕ್ಷಿತ (Unsafe) ಎಂದು ವರದಿ ಬಂದಿರುತ್ತದೆ.<br><br>ಪ್ರಯುಕ್ತ ಸಂಬಂಧಪಟ್ಟ ಆಹಾರ ಸಾಮಗ್ರಿ ಸರಬಾರಾಜುದಾರರ ಹಾಗೂ ತಾಲ್ಲೂಕು ಎಮ್.ಎಸ್.ಪಿ.ಟಿ.ಸಿ.ಮುಖ್ಯಸ್ಥರ ಮಾಹಿತಿಯನ್ನು ಸಲ್ಲಿಸಲು ಹಾಗೂ ಅವರ ಮೇಲೆ ಸೂಕ್ತ ಕ್ರಮ ಜರುಗಿಸುವಂತೆ ಸೂಚಿಸಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಆಳಂದ ಯೋಜನೆ ಇವರಿಗೆ ಕಾರಣ ಕೇಳುವ ನೋಟಿಸು ಜಾರಿ ಮಾಡಿ ಕಳಪೆ ಗುಣಮಟ್ಟದ ಆಹಾರ ಸಾಮಗ್ರಿ ಖರೀದಿಗೆ ಸಂಬಂಧಿಸದಂತೆ ಸೂಕ್ತ ಸಮಜಾಯಿಷಿ ಸಲ್ಲಿಸಲು ಸೂಚಿಸಲಾಗಿರುತ್ತದೆ. ಆದಾಗ್ಯೂ ಕೂಡ ಸದರಿಯವರಿಂದ ಯಾವುದೇ ಸಮಜಾಯಿಷಿ ಸ್ವೀಕೃತವಾಗಿರದ ಕಾರಣ 2ನೇ ಕಾರಣ ಕೇಳುವ ನೋಟಿಸ್‌ನ್ನು ಜಾರಿ ಮಾಡಲಾಗಿರುತ್ತದೆ. ಸದರಿಯವರು ಅಸಮಂಜಸ ಲಿಖಿತ ವಿವರಣೆಯನ್ನು ಸಲ್ಲಿಸಿದ್ದು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಆಳಂದ ರವರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಉಪ ನಿರ್ದೇಶಕರು ಕಲಬುರಗಿ ಇವರು ಶಿಫಾರಸ್ಸು ಮಾಡಿದ್ದು ಈ ಬಗ್ಗೆ ಕ್ರಮ ವಹಿಸಲಾಗುವುದು. |
| ಈ) | ಆಹಾರ ಸರಬರಾಜುದಾರರೊಂದಿಗೆ ಇಲಾಖಾ ಅಧಿಕಾರಿಗಳು ಶಾಮೀಲಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿರುವ ಪ್ರಕರಣಗಳೆಷ್ಟು? (ವಿವರ ನೀಡುವುದು) | ಹಾಸನ ಜಿಲ್ಲೆಯ ಅರಕಲಗೂಡು ಮತ್ತು ಹಾಸನ ತಾಲ್ಲೂಕು ಎಂ.ಎಸ್.ಪಿ.ಟಿ.ಸಿ.ಯ ಸದಸ್ಯರುಗಳು ಅವ್ಯವಹಾರ ಎಸಗಿರುವ ಪ್ರಕರಣದಲ್ಲಿ ಎಂ.ಎಸ್.ಪಿ.ಟಿ.ಸಿ. ಸದಸ್ಯರುಗಳಿಂದ ಬಡ್ಡಿಯೊಂದಿಗೆ ಹಣ ವಸೂಲಾತಿ ಮಾಡಲು ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಸೂಚನೆ ನೀಡಿದ್ದರೂ ಸಹ ಕ್ರಮ ಜರುಗಿಸದೇ ಇರುವ ಕರ್ತವ್ಯಲೋಪ ಸಂಬಂಧ ಸದರಿ ಅಧಿಕಾರಿಗಳಿಗೆ ನೋಟೀಸು ಜಾರಿ ಮಾಡಲಾಗಿರುತ್ತದೆ. |

| | | |
|---|---|---|
| | | ಮುಂದುವರೆದು, ಸದರಿ ಪ್ರಕರಣದ ಸಂಬಂಧ ಹಿರಿಯ ಅಧಿಕಾರಿಗಳಿಂದ ತನಿಖೆ ನಡೆಸಲು ಕ್ರಮವಹಿಸಲಾಗಿದ್ದು, ತನಿಖಾಧಿಕಾರಿಗಳು ಸಲ್ಲಿಸುವ ತನಿಖಾ ವರದಿಯನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.<br><br>ಕೊಡಗು ಜಿಲ್ಲೆ, ಸೋಮವಾರಪೇಟೆ **MSPTC** ಕೇಂದ್ರದಲ್ಲಿ ಅವ್ಯವಹಾರದಲ್ಲಿ ಭಾಗಿಯಾಗಿದ್ದವರೆನ್ನಲಾದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ದಾಖಲಾತಿ ಮತ್ತು ಆರೋಪ ಪಟ್ಟಿಯನ್ನು ಸಲ್ಲಿಸುವಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಡಗು ಇವರನ್ನು ಕೋರಲಾಗಿತ್ತು. ಅದರಂತೆ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕೊಡಗು ಜಿಲ್ಲೆ ಇವರು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಡಗು ಜಿಲ್ಲೆ ಇವರಿಗೆ ಸೂಚಿಸಿದಂತೆ ಪ್ರಕರಣ ಸಂಬಂಧ ಆರೋಪ ಪಟ್ಟಿ ಮತ್ತು ದಾಖಲಾತಿಗಳನ್ನು ಸಲ್ಲಿಸಿದ್ದು, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಪ್ರಾರಂಭಿಸಲು ಕ್ರಮವಹಿಸಲಾಗಿದೆ.<br><br>ಕಲಬುರಗಿ ಜಿಲ್ಲೆ ಕಲಬುರಗಿ (ಗ್ರಾಮಾಂತರ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ ಫಲಾನುಭವಿಗಳಿಗಿಂತ ಹೆಚ್ಚಿಗೆ ಆಹಾರ ಸಾಮಗ್ರಿ ಬೇಡಿಕೆಯನ್ನು ಎಂ.ಎಸ್.ಪಿ.ಟಿ.ಸಿ.ಗೆ ಕಳುಹಿಸಿ ಬೇಡಿಕೆಯಂತೆ ಆಹಾರ ಸಾಮಗ್ರಿಗಳನ್ನು ಪಡೆಯದೆ ನಕಲಿ ಬಿಲ್ಲುಗಳನ್ನು ಪಡೆದು ಎಂ.ಎಸ್.ಪಿ.ಟಿ.ಸಿ. ರವರ ಜೊತೆ ಶಾಮೀಲಾಗಿ ಹಣ ದುರುಪಯೋಗ ಪಡಿಸಿಕೊಂಡಿರುವ ಪ್ರಕರಣದ ಸಂಬಂಧ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಲಬುರಗಿ ಇವರು ವರದಿ ಸಲ್ಲಿಸುತ್ತಾ, ಉನ್ನತ ಮಟ್ಟದ ತನಿಖೆಗೆ ಶಿಫಾರಸ್ಸು ಮಾಡಿರುತ್ತಾರೆ. ಅದರಂತೆ, ಪ್ರಕರಣದ ಸಂಬಂಧ ಹಿರಿಯ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಅಧಿಕಾರಿಗಳ ತನಿಖಾ ತಂಡವನ್ನು ರಚಿಸಿ ಕೂಲಂಕಷ ತನಿಖೆ ನಡೆಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ:ಮಮಇ 134 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.

## ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಡಾ. Y.A ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 861 ಗೆ ಒದಗಿಸಿರುವ ಅನುಬಂಧ

### ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಮಕ್ಕಳ ವಿವರ

| ಕ್ರ.ಸಂ | ಜಿಲ್ಲೆಯ ಹೆಸರು | ಕಾರ್ಯ ನಿರತ ಅಂ.ಕೇ. ಸಂ | ಕಾರ್ಯ ನಿರತ ಮಿನಿ ಅಂ.ಕೇ. ಸಂ | ಒಟ್ಟು ಅಂ.ಕೇ. ಸಂ | 06 ತಿಂ - 3 ವರ್ಷ | | | 3 - 6 ವರ್ಷ | | | 06 ತಿಂ - 6 ವರ್ಷಗಳ ಮಕ್ಕಳ ಸಂಖ್ಯೆ |
|---|---|---|---|---|---|---|---|---|---|---|---|
| | | | | | ಗಂಡು | ಹೆಣ್ಣು | ಒಟ್ಟು | ಗಂಡು | ಹೆಣ್ಣು | ಒಟ್ಟು | ಒಟ್ಟು |
| 1 | ಬಾಗಲಕೋಟೆ | 2427 | 17 | 2444 | 46140 | 44552 | 90692 | 39085 | 38725 | 77810 | 168502 |
| 2 | ಬೆಂಗಳೂರು (ಗ್ರಾ) | 1212 | 65 | 1277 | 16084 | 15186 | 31270 | 9634 | 9409 | 19043 | 50313 |
| 3 | ರಾಮನಗರ | 1344 | 242 | 1586 | 16877 | 15811 | 32688 | 12034 | 11877 | 23911 | 56599 |
| 4 | ಬೆಂಗಳೂರು (ನ) | 2875 | 2 | 2877 | 82622 | 81922 | 164544 | 37323 | 36464 | 73787 | 238331 |
| 5 | ಬೆಳಗಾವಿ | 5642 | 14 | 5656 | 102971 | 97973 | 200944 | 90006 | 88754 | 178760 | 379704 |
| 6 | ಬಳ್ಳಾರಿ | 1345 | 13 | 1358 | 34819 | 33247 | 68066 | 22400 | 23145 | 45545 | 113611 |
| 7 | ಬೀದರ್ | 2050 | 1 | 2051 | 46336 | 44902 | 91238 | 27703 | 27076 | 54779 | 146017 |
| 8 | ವಿಜಯಪುರ | 2754 | 1 | 2755 | 69266 | 66422 | 135688 | 57152 | 54894 | 112046 | 247734 |
| 9 | ಚಾಮರಾಜನಗರ | 1399 | 40 | 1439 | 14517 | 13731 | 28248 | 11669 | 11515 | 23184 | 51432 |
| 10 | ಚಿಕ್ಕಮಗಳೂರು | 1741 | 117 | 1858 | 14372 | 13878 | 28250 | 11565 | 11151 | 22716 | 50966 |
| 11 | ಚಿತ್ರದುರ್ಗ | 2331 | 97 | 2428 | 33130 | 31842 | 64972 | 28065 | 27374 | 55439 | 120411 |
| 12 | ಮಂಗಳೂರು | 2125 | 5 | 2130 | 30833 | 30139 | 60972 | 22816 | 22380 | 45196 | 106168 |
| 13 | ದಾವಣಗೆರೆ | 1728 | 43 | 1771 | 58186 | 56644 | 114830 | 43336 | 42610 | 85946 | 200776 |
| 14 | ಧಾರವಾಡ | 1616 | 6 | 1622 | 31871 | 30267 | 62138 | 23089 | 22553 | 45642 | 107780 |
| 15 | ಗದಗ | 1247 | 1 | 1248 | 20720 | 20136 | 40856 | 18846 | 18668 | 37514 | 78370 |
| 16 | ಕಲಬುರಗಿ | 3393 | 27 | 3420 | 68360 | 66479 | 134839 | 59938 | 58497 | 118435 | 253274 |
| 17 | ಯಾದಗಿರಿ | 1547 | 21 | 1568 | 35448 | 33839 | 69287 | 30677 | 30569 | 61246 | 130533 |
| 18 | ಹಾಸನ | 2500 | 191 | 2691 | 22676 | 21983 | 44659 | 16532 | 16369 | 32901 | 77560 |
| 19 | ಹಾವೇರಿ | 1986 | 5 | 1991 | 32061 | 30936 | 62997 | 30922 | 30542 | 61464 | 124461 |
| 20 | ಕೋಲಾರ | 2125 | 55 | 2180 | 30366 | 29518 | 59884 | 19547 | 19764 | 39311 | 99195 |
| 21 | ಚಿಕ್ಕಬಳ್ಳಾಪುರ | 1914 | 100 | 2014 | 22370 | 21844 | 44214 | 15228 | 15076 | 30304 | 74518 |
| 22 | ಕೊಡಗು | 869 | 14 | 883 | 7928 | 7394 | 15322 | 4440 | 4503 | 8943 | 24265 |
| 23 | ಕೊಪ್ಪಳ | 1936 | 24 | 1960 | 33542 | 32693 | 66235 | 33089 | 32326 | 65415 | 131650 |
| 24 | ಮಂಡ್ಯ | 2311 | 247 | 2558 | 25435 | 23666 | 49101 | 18003 | 17512 | 35515 | 84616 |
| 25 | ಮೈಸೂರು | 2815 | 107 | 2922 | 41586 | 39649 | 81235 | 29329 | 27861 | 57190 | 138425 |
| 26 | ರಾಯಚೂರು | 2824 | 32 | 2856 | 55143 | 54255 | 109398 | 47385 | 46976 | 94361 | 203759 |
| 27 | ಶಿವಮೊಗ್ಗ | 2302 | 261 | 2563 | 31699 | 25289 | 56988 | 22914 | 22331 | 45245 | 102233 |
| 28 | ತುಮಕೂರು | 3783 | 416 | 4199 | 38486 | 37973 | 76459 | 29857 | 29583 | 59440 | 135899 |
| 29 | ಉಡುಪಿ | 1222 | 0 | 1222 | 13425 | 12898 | 26323 | 10981 | 10706 | 21687 | 48010 |
| 30 | ಉತ್ತರ ಕನ್ನಡ | 2646 | 136 | 2782 | 21198 | 20063 | 41261 | 24978 | 24454 | 49432 | 90693 |
| 31 | ವಿಜಯನಗರ | 1561 | 29 | 1590 | 30368 | 28687 | 59055 | 27931 | 27388 | 55319 | 114374 |
| | ರಾಜ್ಯದ ಒಟ್ಟು | 67570 | 2329 | 69899 | 1128835 | 1083818 | 2212653 | 876474 | 861052 | 1737526 | 3950179 |